ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1391
ಪ್ರಶ್ನೆ ಕೇಳಿರುವ ವಿಧಾನಸಭೆಯ ಸದಸ್ಯರು	ಎಸ್ಎನ್ (ಬಾಗೇಪಲ್ಲಿ)
ಉತ್ತರ ನೀಡುವ ಸಚಿವರು	ಮಾನ್ಯ ಕೃಷಿ ಸಚಿವರು
ಉತ್ತರಿಸಬೇಕಾದ ದಿನಾಂಕ	24.07.2024

ವಿಷಯ: ಬೆಳೆ ವಿಮೆ

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಬೆಳೆ ಸಂಪೂರ್ಣ ನಾಶ ಆಗಿದ್ದರೂ ಬೆಳೆ ವಿಮೆ ಸರಿಯಾಗಿ ಬಾರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಬೆಳೆ ಸಂಪೂರ್ಣ ನಾಶ ಆಗಿದ್ದರೂ ಬೆಳೆ ವಿಮೆ ಸರಿಯಾಗಿ ಬಾರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ . ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯ (PMFBY) ಪರಿಷ್ಕೃತ ಮಾರ್ಗಸೂಚಿಯನ್ವಯ 2023-24 ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಒಟ್ಟು 41508 ಅರ್ಹ ರೈತ ಪ್ರಸ್ತಾವನೆಗಳಿಗೆ ಒಟ್ಟು ರೂ.44.14 ಕೋಟಿಗಳ ಬೆಳೆ ವಿಮೆ ಪರಿಹಾರ ಮೊತ್ತ ಮಂಜೂರಾಗಿರುತ್ತದೆ .
ಆ)	ಬೆಳೆ ಕಟಾವು ಪ್ರಯೋಗ ತಪ್ಪಾಗಿ ಮಾಡಿದ್ದ ಅಧಿಕಾರಿಗಳ ತಪ್ಪಿನಿಂದ ರೈತರಿಗೆ ಅನ್ಯಾಯವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;	ಬೆಳೆ ಕಟಾವು ಪ್ರಯೋಗಗಳನ್ನು ಕೈಗೊಳ್ಳಲು ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯು ನೋಡಲ್ ಸಂಸ್ಥೆಯಾಗಿರುತ್ತದೆ . 2023-24 ನೇ ಸಾಲಿನ ಚಿಕ್ಕಬಳ್ಳಾಪುರ ಜಿಲ್ಲೆಯ ಬೆಳೆ ಕಟಾವು ಪ್ರಯೋಗಗಳಿಗೆ ಸಂಬಂಧಿಸಿದಂತೆ ಯಾವುದೇ ಲೋಪದೋಷಗಳು ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯಕ್ಕೆ ಸ್ವೀಕೃತವಾಗಿರುವುದಿಲ್ಲ .

ಇ)	ಬೆಳೆ ವಿಮೆಯ ಹಣ ಬಾರದ ರೈತರಿಗೆ ಹಣ ಪಾವತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)	PMFBY ಮಾರ್ಗಸೂಚಿಯನ್ವಯ ನೋಂದಣಿಯಾದ ಅರ್ಹ ರೈತರಿಗೆ ಬೆಳೆ ವಿಮೆ ಪರಿಹಾರ ಮೊತ್ತ ಸಂದಾಯವಾಗುತ್ತದೆ . ಅರ್ಹ ಇಲ್ಲದ ರೈತರಿಗೆ ಬೆಳೆ ವಿಮೆ ಪರಿಹಾರ ಮೊತ್ತ ಪಾವತಿಸಲು ಸದರಿ ಮಾರ್ಗಸೂಚಿಯಲ್ಲಿ ಅವಕಾಶವಿರುವುದಿಲ್ಲ .

ಕೃಷಿ ನಿರ್ದೇಶಕರು

ಕರ್ನಾಟಕ ಸರ್ಕಾರ

(ಕೃಷಿ ಇಲಾಖೆ)

ಕೃಷಿ ಆಯುಕ್ತರ ಕಾರ್ಯಾಲಯ, ನಂ.01, ಶೇಷಾದ್ರಿ ರಸ್ತೆ, ಬೆಂಗಳೂರು-01. ಸಂಖ್ಯೆ:ಜಕೃನಿ(ಬೆವಿ)/LAQ-1391/2024-25
ದಿನಾಂಕ:18.07.2024

ರವರಿಗೆ,

ಸರ್ಕಾರದ ಕಾರ್ಯದರ್ಶಿಗಳು,
ಕೃಷಿ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀ ಸುಬ್ಬಾರೆಡ್ಡಿ ಎಸ್.ಎನ್.
(ಬಾಗೇಪಲ್ಲಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ
ಸಂಖ್ಯೆ:1391 ಗೆ
ಉತ್ತರಿಸುವ ಕುರಿತು.
*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀ ಸುಬ್ಬಾರೆಡ್ಡಿ ಎಸ್.ಎನ್ (ಬಾಗೇಪಲ್ಲಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1391 ಗೆ ಮಾಹಿತಿ ಸಿದ್ಧಪಡಿಸಿ ಈ ಪತ್ರದೊಂದಿಗೆ ಲಗತ್ತಿಸಿ ಸಲ್ಲಿಸಲಾಗಿದೆ.

ತಮ್ಮ
ವಿಶ್ವಾಸಿ,

ಕೃಷಿ
ನಿರ್ದೇಶಕರು